**ದಿನಾಂಕ:14-06-2022ರಂದು ಯೋಜನೆಯ** "ಸರಕಾರಿ ಹಿರಿಯ ಪ್ರಾಥಮಿಕ ಶಾಲೆ" **ಚೌಡೇಶ್ವರಹಾಳ** ಗ್ರಾಮ, ತಾ|| ಸುರಪುರ ಜಿ|| ಯಾದಗಿರಿಯಲ್ಲಿ ಮದ್ಯಾಹ್ನ 01.00ಗಂಟೆಗೆ "ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬೆಂಗಳೂರುರವರು ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್ ಇವರು ಚೌಡೇಶ್ವರಹಾಳ ಮರಳು ಬ್ಲಾಕ್‌ನಲ್ಲಿ ಸಾಮಾನ್ಯ ಮರಳು ಗಣಿಗಾರಿಕೆ ಮಾಡಲು ಕೃಷ್ಣಾ ನದಿ ಪಕ್ಕದ ಸರ್ವೆ ನಂ. 27/8, **31/4, 31/5, 31/6, 32/3, 33/2 & 34/2** ಚೌಡೇಶ್ವರಹಾಳ ಗ್ರಾಮ, ಸುರಪುರ ತಾಲ್ಲೂಕು, ಯಾದಗಿರಿ **ಜಿಲ್ಲೆಯಲ್ಲಿ ಒಟ್ಟು 35.00 ಎಕರೆ ಪ್ರದೇಶದಲ್ಲಿ ಪ್ರತಿ ವರ್ಷಕ್ಕೆ 1,31,555 ಟನ್ ಸಾಮರ್ಥ್ಯದ ಮರಳು** ಗಣಿಕಾರಿಕೆಯನ್ನು ಅರೆ-ಯಾಂತ್ರಿಕೃತ ಪದ್ದತಿಯ **(Semi-mechanised method)** ಪ್ರಕಾರ ಸ್ಥಾಪಿಸಲು ಉದ್ದೇಶಿಸಿರುವುದಕ್ಕೆ ಯೋಜನೆಯನ್ನು ಅಭಿವೃದ್ಧಿಪಡಿಸಲು ಪ್ರಸ್ತಾಪಿಸಿರುವ ಯೋಜನೆಯಿಂದ ಪರಿಸರದ ಮೇಲೆ ಆಗುವ ಪರಿಣಾಮಗಳ ಕುರಿತು ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲು **ಜರುಗಿದ ಪರಿಸರ ಸಾರ್ವಜನಿಕ ಆಲಿಕ ಸಭೆಯ** ನಡುವಳಿಗಳು:

**ಹಾಜರಿದ್ದ ಅಧಿಕಾರಿಗಳು :**

**ಶ್ರೀಯುತರು:**

1) **ಶ್ರೀ. ಶಂಕರಗೌಡ ಸೋಮನಾಳ, ಕೆ.ಎ.ಎಸ್. (ಆಯ್ಕೆ ಶ್ರೇಣಿ)**
   **ಅಪರ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಪರಿಸರ ಸಾರ್ವಜನಿಕ ಆಲಿಕೆ ಸಭೆ**
   **ಯಾದಗಿರಿ ಜಿಲ್ಲೆ, ಯಾದಗಿರಿ.**
2) **ಶ್ರೀ. ಮಧುಸೂದನ್,**
   **ಹಿರಯ ಪರಿಸರ ಅಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಕಲಬುರಗಿ.**
3) **ಶ್ರೀ. ಕೆ.ರಾಜು, ಪರಿಸರ ಅಧಿಕಾರಿಗಳು,**
   **ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಯಾದಗಿರಿ**
4) **ಶ್ರೀ. ಸುಬ್ಬಣ್ಣ ಜಮಖಂಡಿ, ತಹಸೀಲ್ದಾರರು, ಸುರಪುರ**

*****

ಸಭೆಯ ಪ್ರಾರಂಭದಲ್ಲಿ ಶ್ರೀ ಸಣ್ಣ ವೆಂಕಟೇಶ ಸನಬಾಳ, ಉಪ ಪರಿಸರ ಅಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಯಾದಗಿರಿ ಇವರು ಮಾನ್ಯ ಅಪರ ಜಿಲ್ಲಾಧಿಕಾರಿಗಳು, ಯಾದಗಿರಿ ಇವರನ್ನು ಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಳ್ಳುವಂತೆ ವಿನಂತಿಸುತ್ತಾ ಸದರಿ ಸಭೆಗೆ ಆಗಮಿಸಿದ ಮಂಡಳಿಯ ಹಿರಿಯ ಪರಿಸರ ಅಧಿಕಾರಿಗಳು, ಕರಾಮಾನಿಮಂ, ಕಲಬುರಗಿ ಇವರನ್ನು ವೇದಿಕೆಯ ಮೇಲೆ ಆಸೀನರಾಗುವಂತೆ ಕೋರಿದರು ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ, ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್‌ನ ಎಲ್ಲಾ ಸಿಬ್ಬಂದಿಗಳಿಗೆ, ಯೋಜನೆಯ ತಾಂತ್ರಿಕ ಸಿಬ್ಬಂಧಿಗಳಿಗೆ, ಪೋಲಿಸ್ ಇಲಾಖಾ ಅಧಿಕಾರಿಗಳಿಗೆ, ಆರೋಗ್ಯ ಇಲಾಖೆ ಸಿಬ್ಬಂದಿಯವರಿಗೆ, ಮಾದ್ಯಮದವರಿಗೆ ಹಾಗೂ ಎಲ್ಲಾ ಸಾರ್ವಜನಿಕರಿಗೆ, ಸಮಸ್ತ ರೈತ ಬಾಂಧವರಿಗೆ ಮತ್ತು ಎಲ್ಲರಿಗೂ ಸ್ವಾಗತವನ್ನು ಕೋರಿದರು.

ಪರಿಸರ ಅಧಿಕಾರಿಗಳು, ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್ ಇವರು ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಚೌಡೇಶ್ವರಹಾಳ ಮರಳು ಬ್ಲಾಕ್‌ನಲ್ಲಿ ಸಾಮಾನ್ಯ ಮರಳು ಗಣಿಗಾರಿಕೆ ಮಾಡಲು ಕೃಷ್ಣಾ ನದಿ ಪಕ್ಕದ ಸರ್ವೆ ನಂ. 27/8, 31/4, 31/5, 31/6, 32/3, 33/2 & 34/2 ಚೌಡೇಶ್ವರಹಾಳ ಗ್ರಾಮ, ಸುರಪುರ ತಾಲ್ಲೂಕು, ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 35.00 ಎಕರೆ ಪ್ರದೇಶದಲ್ಲಿ ಪ್ರತಿ ವರ್ಷಕ್ಕೆ 1,31,555 ಟನ್ ಸಾಮರ್ಥ್ಯದ ಮರಳು

ಗಣಿಗಾರಿಕೆಯನ್ನು ಅರೆ-ಯಾಂತ್ರಿಕೃತ ಪದ್ಧತಿಯ (Semi-mechanised method) ಪ್ರಕಾರ ಸ್ಥಾಪಿಸಲು ಉದ್ದೇಶಿಸಿರುವುದಕ್ಕೆ ಯಾದಗಿರಿ ಜಿಲ್ಲೆಗೆ ಸಂಬಂಧಿಸಿದಂತೆ, ಪ್ರಸ್ಥಾಪಿಸಿರುವ ಯೋಜನೆಯ ಕುರಿತಾದ ಹಾಗೂ ಪರಿಸರದ ಮೇಲೆ ಆಗುವ ಪರಿಣಾಮಗಳ ಕುರಿತು ಸಾರ್ವಜನಿಕರಿಂದ ಅಹವಾಲುಗಳನ್ನು/ಸಲಹೆಗಳನ್ನು ಸ್ವೀಕರಿಸಲು, ದಿನಾಂಕ:14-06-2022ರಂದು "ಸರಕಾರಿ ಹಿರಿಯ ಪ್ರಾಥಮಿಕ ಶಾಲೆ" ಚೌಡೇಶ್ವರಹಾಳ ಗ್ರಾಮದಲ್ಲಿ, ಮದ್ಯಾಹ್ನ 1.00ಗಂಟೆಗೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಆಯೋಜಿಸಲಾಗಿದೆ ಎಂದು ತಿಳಿಸುತ್ತಾ ಜಿಲ್ಲೆಯ ವಿವಿಧ ಕಛೇರಿಗಳಾದ ಜಿಲ್ಲಾಧಿಕಾರಿಗಳ ಕಛೇರಿ, ಯಾದಗಿರಿ, ಮುಖ್ಯ ಕಾರ್ಯನಿರ್ವಾಹಣ ಅಧಿಕಾರಿಗಳ ಕಾರ್ಯಾಲಯ ಜಿಲ್ಲಾ ಪಂಚಾಯತ್, ಯಾದಗಿರಿ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಯಾದಗಿರಿ, ತಾಲೂಕ ಕಾರ್ಯ ನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ್ ಸುರಪುರ, ಜಿಲ್ಲಾ ಕೈಗಾರಿಕಾ ಕೇಂದ್ರ ಯಾದಗಿರಿ, ಗ್ರಾಮ ಪಂಚಾಯತಿ ಕಾರ್ಯಾಲಯ ಸೂಗುರು, ತಹಸೀಲ್ದಾರರು ಕಾರ್ಯಾಲಯ ಸುರಪುರ ಹಾಗೂ ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಯಾದಗಿರಿ ಇವರುಗಳ ಕಾರ್ಯಾಲಯದಲ್ಲಿ ಯೋಜನೆಯ ಕಾರ್ಯಾಕಾರಿ ಸಾರಾಂಶ (ಆಂಗ್ಲ ಮತ್ತು ಕನ್ನಡ ಭಾಷೆಗಳಲ್ಲಿ), ಅಡಕ ಮುದ್ರಿಕೆ ಮತ್ತು ವರದಿಗಳನ್ನು ಸಾರ್ವಜನಿಕರ ಪರಾಮರ್ಶೆಗಾಗಿ 30ದಿನಗಳ ಮುಂಚಿತವಾಗಿ ಇರಿಸಲಾಗಿತ್ತು ಎಂದು ತಿಳಿಸಿದರು ಹಾಗೂ ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಅಧಿಸೂಚನೆಯನ್ನು ರಾಜ್ಯ ಮಟ್ಟದ ಪ್ರಮುಖ ದಿನ ಪತ್ರಿಕೆಗಳಾದ "ದಿ ಹಿಂದೂ" & "ಕನ್ನಡ ಪ್ರಭ" ದಿ:14-05-2022ರಂದು ಹಾಗೂ ಸ್ಥಳೀಯ ದಿನಪತ್ರಿಕೆಯಾದ "ಪ್ರಜಾವಾಣಿ"ಯಲ್ಲಿ ದಿ:18-05-2022ರಂದು ಅಧಿಸೂಚನೆಯ ಪ್ರಕಟಣೆಯನ್ನು ನೀಡಲಾಗಿತ್ತು ಹಾಗೂ ಸಾರ್ವಜನಿಕರಿಂದ ಅಹವಾಲುಗಳನ್ನು ಆಹ್ವಾನಿಸಲಾಗಿತ್ತು ಎಂದು ತಿಳಿಸುತ್ತಾ, ಸಭೆಯನ್ನು ಜರುಗಿಸಲು ಅನುಮತಿಸಬೇಕೆಂದು ಮಾನ್ಯ ಅಧ್ಯಕ್ಷರಲ್ಲಿ ವಿನಂತಿಸಿದರು.

ಸಭೆಯ ಆಧ್ಯಕ್ಷರು ಸಭೆಯನ್ನು ಉದ್ದೇಶಿಸುತ್ತಾ ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್‌ನವರ ತಾಂತ್ರಿಕ ಸಲಹೆಗಾರರಿಗೆ ಉದ್ದೇಶಿತ ಯೋಜನೆಯ ತಾಂತ್ರಿಕ ವಿವರಗಳನ್ನು ಸಭೆಗೆ ಮಂಡಿಸುವಂತೆ ಸೂಚಿಸಿದರು. ಅದರಂತೆ, ಯೋಜನೆಯ ತಾಂತ್ರಿಕ ಸಲಹೆಗಾರರು ಯೋಜನೆಗೆ ಸಂಬಂಧಿಸಿದ ಅಂಶಗಳನ್ನು ಸಭೆಯಲ್ಲಿ ಮಂಡಿಸಿದರು.

ಸಭಾಧ್ಯಕ್ಷರು ಯೋಜನೆಯನ್ನು ಸಂಕ್ಷಿಪ್ತವಾಗಿ ಸಾರ್ವಜನಿಕರಿಗೆ ವಿವರಿಸಿ ಸಾರ್ವಜನಿಕರಲ್ಲಿ ಏನಾದರೂ ಸಲಹೆ, ಸೂಚನೆ, ಟೀಕೆ-ಟಿಪ್ಪಣಿ/ಅಹವಾಲುಗಳು ಇದ್ದಲ್ಲಿ ಮುಕ್ತವಾಗಿ ಲಿಖಿತ ರೂಪದಲ್ಲಾಗಲಿ ಅಥವಾ ಮೌಖಿಕವಾಗಿಯಾಗಲಿ ಸಭೆಯಲ್ಲಿ ಮಂಡಿಸುವಂತೆ ಹಾಗೂ ತಮ್ಮ ಅಭಿಪ್ರಾಯಗಳನ್ನು ವ್ಯಕ್ತ ಪಡಿಸುವಂತೆ ಸೂಚಿಸಿದರು.

ಅದರಂತೆ ಸಭೆಯಲ್ಲಿ ಹಾಜರಿದ್ದ ಈ ಕೆಳಕಂಡ ಗ್ರಾಮಸ್ಥರು ತಮ್ಮ ಅಭಿಪ್ರಾಯಗಳನ್ನು ಈ ಕೆಳಗಿನಂತೆ ವ್ಯಕ್ತ ಪಡಿಸಿದರು:

1. <u>ಶ್ರೀ ಶರಣಯ್ಯ ಸಾ|| ಚೌಡೇಶ್ವರಹಾಳ ಗ್ರಾಮ :-</u> ಇವರು ಮಾತನಾಡುತ್ತಾ ಗ್ರಾಮದ ರಸ್ತೆ ತುಂಬಾ ದುರಸ್ತಿಯಲ್ಲಿರುವುದರಿಂದ ಇಲ್ಲಿ ಸಂಚರಿಸಲು ತುಂಬಾ ತೊಂದರೆಯಾಗುತ್ತಿದ್ದು, ಇವುಗಳನ್ನು ಉತ್ತಮಪಡಿಸಿ ಎಂದರು ಹಾಗೂ ಮಳೆ ಇಲ್ಲದ ಕಾರಣ ಉದ್ಯೋಗ ಮಾಡಲು ಕ್ರಮವನ್ನು ಕೈಗೊಳ್ಳಿ ಎಂದು ವಿನಂತಿಸಿಕೊಂಡರು.

2. <u>ಶ್ರೀ ಚಂದ್ರು ಪೂಜಾರಿ ಸಾ|| ಚೌಡೇಶ್ವರಹಾಳ ಗ್ರಾಮ:</u> ಇವರು ಮಾತನಾಡುತ್ತಾ **ಬೇಸಿಗೆ ಕಾಲದಲ್ಲಿ ನದಿಯ ನೀರನ್ನು ಕುಡಿಯುವುದಕ್ಕೆ ಉಪಯೋಗಿಸುವುದರಿಂದ ಈ ಮರಳು ಗಣಿಗಾರಿಕೆ ಮಾಡುವುದರಿಂದ ಕುಡಿಯುವ ನೀರಿನ ವ್ಯವಸ್ಥೆಯ ಮೇಲೆ ಮತ್ತು ಬೇಸಿಗೆ ಕಾಲದಲ್ಲಿ ನದಿಯ ನೀರನ್ನು**

ಜಮೀನಿಗೆ ತರಲು ಬಳಸುವ ಪೈಪ್‌ಗಳ ಮೇಲೆ ಯಾವುದೇ ಪರಿಣಾಮ ಬೀರದ ಹಾಗೆ ಮರಳು ಗಣಿಗಾರಿಕೆಯನ್ನು ಮಾಡಿ ಮತ್ತು ಧೂಳು ಸಮಸ್ಯೆಯನ್ನು ವಿವರಸಿ ಇದಕ್ಕೆ ಕಟ್ಟುನಿಟ್ಟಿನ ಕ್ರಮ ವಹಿಸಿ ಎಂದು ತಿಳಿಸಿದರು.

- ಯೋಜನೆದಾರರು ಮಾತನಾಡುತ್ತಾ ಧೂಳು ಉತ್ಪತ್ತಿಯಾಗುವುದ ಎರಡು ಕಾರಣಗಳಿಂದ ಅದು ತುಂಬಿದ ಹಾಗು ಖಾಲಿ ಓಡಾಡುವ ಸಮಯದಲ್ಲಿ ಇದಕ್ಕೆ ನಾವು ರಸ್ತೆಯಲ್ಲಿ ನಿರಂತರವಾಗಿ ನೀರನ್ನು ಸಿಂಪರಣೆ ಮಾಡುವುದರ ಮುಲಕ ನಿಯಂತ್ರಿಸುತ್ತೆವೆ ಎಂದು ತಿಳಿಸಿದರು ಹಾಗೂ ಮಾನ್ಯ ಅಧ್ಯಕ್ಷರು ಮಾತನಾಡುತ್ತ ಇಲ್ಲಿ ಕಪ್ಪು ಭೂಮಿ ಇದ್ದು ರಸ್ತೆಯನ್ನು ವೈಜ್ಞಾನಿಕವಾಗಿ ನಿರ್ಮಿಸಿ ಮರಳುಗಾರಿಕೆಯನ್ನು ನಡೆಸಿ ಎಂದು ಸೂಚಿಸಿದರು.

3. ಶ್ರೀ ತಿರುಪತಿ ಸಾ॥ ಚೌಡೇಶ್ವರಹಾಳ ಗ್ರಾಮ: ಇವರು ಮಾತನಾಡುತ್ತಾ ಸುಮಾರು 20-30 ವರ್ಷಗಳಿಂದ ಇಲ್ಲಿ ಮರಳು ತೆಗೆಯುತ್ತಿದ್ದು ಜನರಿಗೆ ಮತ್ತು ಜಾನುವಾರುಗಳಿಗೆ ಯಾವುದೇ ತೊಂದರೆಯಾಗಿರುವುದಿಲ್ಲ ಈಗ ಜೆ.ಸಿ.ಬಿ. ಬಂದು ಅಗೆದಾಗ ಇದರಿಂದ ಜನರಿಗೆ ಮತ್ತು ಜಾನುವಾರುಗಳಿಗೆ ತೊಂದರೆಯಾಗುವ ಸಂಬವವಿರುತ್ತದೆ ಎಂದು ತಿಳಿಸಿದರು.

ಅಂತಿಮವಾಗಿ ಉಪ ಪರಿಸರ ಅಧಿಕಾರಿಗಳು, ಕರಾಮಾನಿಮಂ, ಯಾದಗಿರಿ ಇವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ ಸಭೆಯಲ್ಲಿ ಈ ಯೋಜನೆಗೆ ಸಂಬಂಧಿಸಿದಂತೆ ವ್ಯಕ್ತವಾದ ಅನಿಸಿಕೆಗಳನ್ನು/ಅಭಿಪ್ರಾಯಗಳನ್ನು/ಲಿಖಿತ ಸಲ್ಲಿಕೆಗಳ ಸಾರಾಂಶವನ್ನು ಮತ್ತೊಮ್ಮೆ ಸಭೆಗೆ ತಿಳಿಸುತ್ತಾ ಸದರಿ ಸಭೆಯ ನಡುವಳಿಗಳೊಂದಿಗೆ ಯಥಾವತ್ತಾಗಿ ಬರೆದು ವಿಡಿಯೋ ಮತ್ತು ಛಾಯಾಚಿತ್ರಗಳೊಂದಿಗೆ ಮುಂದಿನ ಕ್ರಮಕ್ಕಾಗಿ ಸರಕಾರಕ್ಕೆ ಸಲ್ಲಿಸಲಾಗುವುದೆಂದು ಸಭೆಗೆ ತಿಳಿಸಿದರು.

ಶ್ರೀ ಶಂಕರಗೌಡ ಸೋಮನಾಳ
ಕೆ.ಎ.ಎಸ್. (ಆಯ್ಕೆ ಶ್ರೇಣಿ)
ಅಪರ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಪರಿಸರ ಸಾರ್ವಜನಿಕ ಸಭೆ, ಯಾದಗಿರಿ
ತಾ॥ & ಜಿ॥ ಜಿಲ್ಲೆ ಯಾದಗಿರಿ.